Akashvani: Bangalore
National News In Kannada
31.10.2025 : 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*********

ಮುಖ್ಯಾಂಶಗಳು

೧. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆ ಅಂಗವಾಗಿ ದೇಶಾದ್ಯಂತ ಇಂದು ಏಕತಾ ದಿನ ಆಚರಣೆ

೨. ಆರ್ಯ ಸಮಾಜ - ಭಾರತೀಯತೆಯ ಬಗ್ಗೆ ನಿರ್ಭಯವಾಗಿ ಮಾತನಾಡುವ ಸಂಘಟನೆಯಾಗಿದೆ; ಪ್ರಧಾನಿ ನರೇಂದ್ರ ಮೋದಿ

೩. ಕಡಲ ಮಾರ್ಗಗಳನ್ನು ಸುರಕ್ಷಿತಗೊಳಿಸುವುದು ದೇಶದ ಪ್ರಮುಖ ಆದ್ಯತೆ- ರಕ್ಷಣಾ ಸಚಿವ ರಾಜನಾಥ್ ಸಿಂಗ್

೪. ಟಿ-೨೦ ಕ್ರಿಕೆಟ್: ಭಾರತದ ವಿರುದ್ಧ ಆಸ್ಟ್ರೇಲಿಯಾ ತಂಡಕ್ಕೆ ೪ ವಿಕೆಟ್‌ಗಳ ಜಯ

************

ವಿಕಸಿತ ಭಾರತದ ಕನಸನ್ನು ಸಾಧಿಸಲು ದೇಶದ ಪ್ರಗತಿಗೆ ತಮ್ಮನ್ನು ತಾವು ಅರ್ಪಿಸಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ, ನಾಗರಿಕರಿಗೆ ಕರೆ ನೀಡಿದ್ದಾರೆ. ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭ ಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯ ಅಂಗವಾಗಿ ಏಕತಾ ನಗರದಲ್ಲಿ ನಡೆದ ರಾಷ್ಟ್ರೀಯ ಏಕತಾ ದಿನದ ಆಚರಣೆಯಲ್ಲಿ ಬೃಹತ್ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ೨೦೧೪ ರಿಂದ ಕೇಂದ್ರ ಸರ್ಕಾರ, ನಕ್ಸಲ್ ಮತ್ತು ಮಾವೋವಾದಿ ಚಟುವಟಿಕೆಗೆ ನಿರ್ಣಾಯಕ ಮತ್ತು ಪ್ರಬಲ ಹೊಡೆತ ನೀಡಿದೆ ಎಂದು ಹೇಳಿದರು. ೨೦೧೪ರ ಮೊದಲು ದೇಶಾದ್ಯಂತ ಸುಮಾರು ನೂರು ಜಿಲ್ಲೆಗಳು ಮಾವೋವಾದಿ ಚಟುವಟಿಕೆಗಳಿಂದ ಪ್ರಭಾವಿತವಾಗಿದ್ದವು. ಆದರೆ ಇಂದು ಆ ಸಂಖ್ಯೆ ಕೇವಲ ಹನ್ನೊಂದಕ್ಕೆ ಇಳಿದಿದೆ. ಕೇವಲ ಮೂರು ಜಿಲ್ಲೆಗಳು ಮಾತ್ರ ಮಾವೋವಾದದಿಂದ ಗಂಭೀರವಾಗಿ ಪ್ರಭಾವಿತವಾಗಿವೆ ಎಂದರು. ಸ್ವಾತಂತ್ರ್ಯದ ನಂತರ, ಸರ್ದಾರ್ ಪಟೇಲ್ ಅವರು ೫೫೦ ಕ್ಕೂ ಹೆಚ್ಚು ಪ್ರಾಂತ್ಯಗಳನ್ನು ಒಗ್ಗೂಡಿಸುವ ಮೂಲಕ ಅಸಾಧ್ಯವೆಂದು ತೋರಿದ್ದನ್ನು ಸಾಧಿಸಿದರು, 'ಏಕ್ ಭಾರತ್, ಶ್ರೇಷ್ಠ ಭಾರತ್' ಎಂಬ ದೃಷ್ಟಿಕೋನವನ್ನು ಸಾಕಾರಗೊಳಿಸಿದರು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

************

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ ನೇ ಜನ್ಮ ದಿನಾಚರಣೆಯ ಅಂಗವಾಗಿ, ದೇಶಾದ್ಯಂತ ಇಂದು ರಾಷ್ಟ್ರೀಯ ಏಕತಾ ದಿನವನ್ನು ಆಚರಿಸಲಾಯಿತು. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಇಂದು ನವದೆಹಲಿಯ ಇಂಡಿಯಾ ಗೇಟ್‌ನಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯಂದು ಏಕತಾ ಮೆರವಣಿಗೆಯಲ್ಲಿ ಭಾಗವಹಿಸಿ, ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಪುದುಚೇರಿಯ ಬೀಚ್ ರಸ್ತೆಯಲ್ಲಿ ನಡೆದ ಸಮಾರಂಭದಲ್ಲಿ,

ಲೆಫ್ಟಿನೆಂಟ್ ಗವರ್ನರ್ ಕೆ. ಕೈಲಾಶನಾಥನ್ ಮತ್ತು ಮುಖ್ಯಮಂತ್ರಿ ಎನ್. ರಂಗಸಾಮಿ ಅವರು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ರಾಷ್ಟ್ರೀಯ ಏಕತಾ ಪ್ರತಿಜ್ಞೆಯನ್ನು ಸ್ವೀಕರಿಸಿದರು. ಪೊಲೀಸ್ ಸಿಬ್ಬಂದಿ ಗೌರವ ವಂದನೆ ಸಲ್ಲಿಸಿದರು.

************

ಆರ್ಯ ಸಮಾಜವು ಭಾರತೀಯತೆಯ ಬಗ್ಗೆ ನಿರ್ಭಯವಾಗಿ ಮಾತನಾಡುವ ಸಂಘಟನೆಯಾಗಿದೆ ಮತ್ತು ಅದು ಕಟ್ಟಾ ರಾಷ್ಟ್ರೀಯವಾದಿಗಳ ಸಂಘಟನೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ದೆಹಲಿಯಲ್ಲಿ ನಡೆದ ಅಂತಾರಾಷ್ಟ್ರೀಯ ಆರ್ಯ ಮಹಾಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಲಾಲಾ ಲಜಪತ್ ರಾಯ್ ಮತ್ತು ರಾಮ್ ಪ್ರಸಾದ್ ಬಿಸ್ಮಿಲ್ ಅವರಂತಹ ಕ್ರಾಂತಿಕಾರಿಗಳು ಆರ್ಯ ಸಮಾಜದಿಂದ ಸ್ಫೂರ್ತಿ ಪಡೆದರು ಎಂದರು. ದುರದೃಷ್ಟವಶಾತ್, ರಾಜಕೀಯ ಕಾರಣಗಳಿಂದಾಗಿ, ಸ್ವಾತಂತ್ರ್ಯ ಹೋರಾಟದಲ್ಲಿ ಆರ್ಯ ಸಮಾಜದ ಪಾತ್ರಕ್ಕೆ ಅರ್ಹವಾದ ಗೌರವ ಸಿಗಲಿಲ್ಲ ಎಂದು ಅಸಮಧಾನ ವ್ಯಕ್ತಪಡಿಸಿದರು. ಸ್ವಾಮಿ ದಯಾನಂದರು ದಾರ್ಶನಿಕರಾಗಿದ್ದು, ಭಾರತವು ನಿಜವಾಗಿಯೂ ಪ್ರಗತಿ ಸಾಧಿಸಲು, ವಸಾಹತುಶಾಹಿ ಆಳ್ವಿಕೆಯಿಂದ ಮುಕ್ತವಾಗುವುದು ಮಾತ್ರವಲ್ಲದೆ, ಸಮಾಜವನ್ನು ಪೀಡಿಸುತ್ತಿದ್ದ, ಆಳವಾಗಿ ಬೇರೂರಿರುವ ಸಾಮಾಜಿಕ ಅನ್ಯಾಯಗಳನ್ನು ತೊಡೆದುಹಾಕುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು ಎಂದರು. ಸ್ವಾಮಿ ದಯಾನಂದರು ತಾರತಮ್ಯ ಮತ್ತು ಅಸ್ಪೃಶ್ಯತೆಯನ್ನು ವಿರೋಧಿಸಿದರು. ಅಸ್ಪೃಶ್ಯತೆಯನ್ನು ನಿರ್ಮೂಲನೆ ಮಾಡಲು ಹಾಗೂ ಹೆಚ್ಚು ಸಮಗ್ರ ಮತ್ತು ಸಮಾನ ಸಮಾಜಕ್ಕಾಗಿ ಶ್ರಮಿಸಲು ಜನರನ್ನು ಅವರು ಒತ್ತಾಯಿಸಿದರು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

************

ಭಾರತ-ಆಸಿಯಾನ್ ಒಪ್ಪಂದದ ಕೇಂದ್ರಬಿಂದು-ಕಡಲ ಭದ್ರತೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಎರಡನೇ ಆವೃತ್ತಿಯ ಆಸಿಯಾನ್-ಭಾರತ ಕಡಲ ಸಮರಾಭ್ಯಾಸಕ್ಕೆ ಸಮ್ಮತಿ ಸೂಚಿಸಿರುವುದಕ್ಕೆ ಅವರು ಆಸಿಯಾನ್ ಸದಸ್ಯ ರಾಷ್ಟ್ರಗಳನ್ನು ಶ್ಲಾಘಿಸಿದ್ದಾರೆ. ಕೌಲಾಲಂಪುರದಲ್ಲಿ ಇಂದು ನಡೆದ ಆಸಿಯಾನ್-ಭಾರತ ರಕ್ಷಣಾ ಸಚಿವರ ಅನೌಪಚಾರಿಕ ಸಭೆಯಲ್ಲಿ ಉದ್ಘಾಟನಾ ಭಾಷಣ ಮಾಡಿದ ಸಚಿವ ರಾಜನಾಥ್ ಸಿಂಗ್, ಕಡಲ ಮಾರ್ಗಗಳನ್ನು ಸುರಕ್ಷಿತಗೊಳಿಸುವುದು ದೇಶದ ಪ್ರಮುಖ ಆದ್ಯತೆಯಾಗಿದೆ. ಭಾರತದ ಅರ್ಧಕ್ಕಿಂತ ಹೆಚ್ಚು ವ್ಯಾಪಾರ, ದಕ್ಷಿಣ ಚೀನಾ ಸಮುದ್ರ ಮತ್ತು ಮಲಕ್ಕಾ ಜಲಸಂಧಿಯ ಮೂಲಕ ಹಾದುಹೋಗುತ್ತದೆ ಎಂದು ಹೇಳಿದರು.

**ಧ್ವನಿ : ಸಚಿವ ರಾಜನಾಥ್ ಸಿಂಗ್( 23 ಸೆಕೆಂಡುಗಳು)**

************

ಪಾಕಿಸ್ತಾನದ ಪಶ್ಚಿಮ ಗಡಿಯಲ್ಲಿ ಭಾರತೀಯ ಸೇನೆ, ವಾಯುಪಡೆ ಮತ್ತು ನೌಕಾಪಡೆ ಜಂಟಿಯಾಗಿ ತ್ರಿಶೂಲ್ ಸಮರಾಭ್ಯಾಸದಲ್ಲಿ ಭಾಗಿಯಾಗಿದೆ. ಈ ಕುರಿತು ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ನೌಕಾ ಕಾರ್ಯಚರಣೆಗಳ ಮಹಾನಿರ್ದೇಶಕ ವೈಸ್ ಅಡ್ಮಿರಲ್ ಎ.ಎನ್.ಪ್ರಮೋದ್, ಮುಂದಿನ ತಿಂಗಳು ೧೩ರವರೆಗೆ ಈ ಸಮರಾಭ್ಯಾಸ ನಡೆಯಲಿದೆ ಎಂದು ತಿಳಿಸಿದ್ದಾರೆ. ಭಾರತೀಯ ಸೇನೆಯ ದಕ್ಷಿಣ ಕಮಾಂಡ್, ಭಾರತೀಯ ನೌಕಾಪಡೆಯ ಪಶ್ಚಿಮ ಕಮಾಂಡ್ ಮತ್ತು ಭಾರತೀಯ ವಾಯುಪಡೆಯ ನೈರುತ್ಯ ಕಮಾಂಡ್, ಹಾಗೆಯೇ ಕರಾವಳಿ ರಕ್ಷಣಾ ಪಡೆ, ಬಿಎಸ್‌ಎಫ್ ಮತ್ತು ಇತರೆ

ಸಶಸ್ತ್ರ ಪಡೆಗಳು ತ್ರಿಶೂಲ್ ಸಮರಾಭ್ಯಾಸದಲ್ಲಿ ಭಾಗವಹಿಸಿದೆ ಎಂದು ತಿಳಿಸಿದರು. ೨೦ರಿಂದ ೨೫ ಯುದ್ಧ ನೌಕೆಗಳು ಮತ್ತು ೪೦ ಯುದ್ಧ ವಿಮಾನಗಳೊಂದಿಗೆ ಭಾರತೀಯ ನೌಕಾಪಡೆಯು ಈ ಸಮಾರಾಭ್ಯಾಸದಲ್ಲಿ ಭಾಗವಹಿಸಿದೆ ಎಂದು ವೈಸ್ ಅಡ್ಮಿರಲ್ ಎ.ಎನ್.ಪ್ರಮೋದ್ ಮಾಹಿತಿ ನೀಡಿದರು.

************

ಸಾಂಪ್ರದಾಯಿಕ ಪೈಪೋಟಿ, ಭಯೋತ್ಪಾದನೆ ಮತ್ತು ನಕಲಿ ಯುದ್ಧಗಳು, ಜೊತೆಗೆ ತಪ್ಪು ಮಾಹಿತಿ ಅಭಿಯಾನಗಳು ಬೆದರಿಕೆಗನ್ನು ಒಡ್ಡುತ್ತವೆ ಎಂದು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ರಾಷ್ಟ್ರೀಯ ಭದ್ರತೆಗಾಗಿ ಯುವಕರನ್ನು ಸಬಲೀಕರಣಗೊಳಿಸುವ ಯುವ ನಾಯಕರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಇಂದು ಯುದ್ಧವು ಹೆಚ್ಚು ಚಲನಶೀಲವಲ್ಲದ ಮತ್ತು ಸಂಪರ್ಕವಿಲ್ಲದಂತಾಗುತ್ತಿದೆ ಎಂದರು.

************

ಬಿಹಾರದಲ್ಲಿ, ಹವಾಮಾನ ವೈಪರೀತ್ಯ ಇಂದು ವಿಧಾನಸಭಾ ಚುನಾವಣೆಯ ಪ್ರಚಾರದ ಮೇಲೆ ಪರಿಣಾಮ ಬೀರಿತು. ಹಲವಾರು ಸ್ಟಾರ್ ಪ್ರಚಾರಕರು ಮತ್ತು ವಿವಿಧ ಪಕ್ಷಗಳ ಹಿರಿಯ ನಾಯಕರು ಹೆಲಿಕಾಪ್ಟರ್ ಹಾರಾಟದಲ್ಲಿ ವಿಳಂಬ ಅನುಭವಿಸಿದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಇಂದು ಬಕ್ಸರ್ ಮತ್ತು ಪಾಟ್ನಾದಲ್ಲಿ ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಿದರು. ಇದೇ ವೇಳೆ ಮುಂಗೇರ್‌ನ ಜಮಾಲ್‌ಪುರದಲ್ಲಿ ಮಹಾಘಟಬಂಧನ್ ಮೈತ್ರಿಕೂಟದ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಪ್ರಚಾರ ನಡೆಸಿದರು. ನಂತರ ಬೇಗುಸರಾಯ್, ಖಗಾರಿಯಾ ಮತ್ತು ಸಮಷ್ಟಿಪುರದಲ್ಲಿ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಏತನ್ಮಧ್ಯೆ, ಪಾಟ್ನಾದಲ್ಲಿ ಇಂದು ಎನ್‌ಡಿಎ ತನ್ನ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಈ ಸಂದರ್ಭದಲ್ಲಿ ಮಾತನಾಡಿದ ಬಿಹಾರ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ, ಎನ್‌ಡಿಎ ಹಿಂದೆಯೂ ಬಿಹಾರದ ಜನರಿಗಾಗಿ ಕೆಲಸ ಮಾಡಿದೆ ಮತ್ತು ಮುಂಬರುವ ವರ್ಷಗಳಲ್ಲಿಯೂ ಅದನ್ನು ಮುಂದುವರಿಸುತ್ತದೆ ಎಂದು ಹೇಳಿದರು.

************

ಮಾಜಿ ಕ್ರಿಕೆಟಿಗ ಮತ್ತು ಕಾಂಗ್ರೆಸ್ ಹಿರಿಯ ನಾಯಕ ಮೊಹಮ್ಮದ್ ಅಜರುದ್ದೀನ್ ಇಂದು ಮಧ್ಯಾಹ್ನ ತೆಲಂಗಾಣ ರಾಜ್ಯ ಸಚಿವ ಸಂಪುಟದಲ್ಲಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಹೈದರಾಬಾದ್‌ನ ರಾಜಭವನದಲ್ಲಿ ನಡೆದ ಔಪಚಾರಿಕ ಕಾರ್ಯಕ್ರಮದಲ್ಲಿ ತೆಲಂಗಾಣ ರಾಜ್ಯಪಾಲ ಜಿಷ್ಣು ದೇವ್ ವರ್ಮಾ ಅವರು ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು. ಈ ಸೇರ್ಪಡೆಯೊಂದಿಗೆ, ರೇವಂತ್ ರೆಡ್ಡಿ ಅವರ ಸಂಪುಟದಲ್ಲಿ ಸಚಿವರ ಸಂಖ್ಯೆ ೧೬ ಕ್ಕೆ ಏರಿಕೆಯಾಗಿದೆ. ಹೊಸದಾಗಿ ಸೇರ್ಪಡೆಗೊಂಡ ಸಚಿವರಿಗೆ ಖಾತೆ ಹಂಚಿಕೆ ಇನ್ನೂ ಆಗಿಲ್ಲ.

************

ನವದೆಹಲಿಯ ಆಕಾಶವಾಣಿ ಭವನದಲ್ಲಿ ಸ್ವಚ್ಛತಾ ಅಭಿಯಾನಕ್ಕೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಎಲ್.ಮುರುಗನ್ ನೇತೃತ್ವ ವಹಿಸಿದ್ದರು. ಈ ವೇಳೆ ಆಕಾಶವಾಣಿ ಭವನದ ಬಾಪು ಸ್ಟುಡಿಯೋದಲ್ಲಿ ಮಾತನಾಡಿದ ಸಚಿವರು, 'ಸ್ವಚ್ಛತೆಯೇ ಸೇವೆ'ಯ ಭಾಗವಾಗಿ ವಿಶೇಷ ಅಭಿಯಾನ

೫.೦ ಉಪಕ್ರಮದ ಅಡಿಯಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಮತ್ತು ಅದರ ಸಂಸ್ಥೆಗಳ ಪ್ರಯತ್ನಗಳನ್ನು ವಿವರಿಸಿದರು. ಈ ಅಭಿಯಾನವು ಕೆಲಸದ ಸ್ಥಳಗಳನ್ನು ಸ್ವಚ್ಛಗೊಳಿಸುವುದು, ತ್ಯಾಜ್ಯವನ್ನು ಗುರುತಿಸುವುದು ಮತ್ತು ವಿಲೇವಾರಿ ಮಾಡುವುದು, ಹಾಗೂ ಸ್ವಚ್ಛ ದಾಖಲೆ ನಿರ್ವಹಣೆ ನಿಟ್ಟಿನಲ್ಲಿ ಡಿಜಿಟಲೀಕರಣಕ್ಕೆ ಕಾರಣವಾಗಿದೆ.

************

ಕೇಂದ್ರ ಸಂಪರ್ಕ ಖಾತೆ ರಾಜ್ಯ ಸಚಿವ ಚಂದ್ರಶೇಖರ ಪೆಮ್ಮಸಾನಿ ನವದೆಹಲಿಯಲ್ಲಿ ಇಂದು ಸಂಚಾರ ಭವನದಲ್ಲಿ ಸಂವಹನ ಇಲಾಖೆಯಿಂದ ನಡೆಸಲ್ಪಡುತ್ತಿರುವ ವಿಶೇಷ ಅಭಿಯಾನ ೫.೦ ಅಡಿಯಲ್ಲಿ ಸ್ವಚ್ಛತಾ ಚಟುವಟಿಕೆಗಳನ್ನು ಪರಿಶೀಲಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸ್ವಚ್ಛತೆಯು ಅಭಿವೃದ್ಧಿಯ ಪ್ರಮುಖ ಭಾಗವಾಗಿದೆ. ಈ ರೀತಿಯ ಉಪಕ್ರಮಗಳು ನಾಗರಿಕರಲ್ಲಿ ಸ್ವಯಂ ಜಾಗೃತಿ ಮೂಡಿಸಲು ಸಹಾಯ ಮಾಡುತ್ತದೆ ಮತ್ತು ದೇಶವಾಸಿಗಳನ್ನು ಜಾಗೃತಗೊಳಿಸುವ ಒಂದು ಭಾಗವಾಗಿದೆ ಎಂದು ಹೇಳಿದರು.

************

ಆಸ್ಟ್ರೇಲಿಯಾದ ಮೆಲ್ಬೋರ್ನ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆದ ಐದು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತದ ವಿರುದ್ಧ ಆಸ್ಟ್ರೇಲಿಯಾ ತಂಡ ೪ ವಿಕೆಟ್‌ಗಳ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ೧೮.೪ ಓವರ್‌ಗಳಲ್ಲಿ ೧೨೫ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಗೆಲುವಿನ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ, ೧೩.೨ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೨೬ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

************

ಕೇಂದ್ರ ಜವಳಿ ಸಚಿವಾಲಯ ಆಯೋಜಿಸಿರುವ ಎರಡು ದಿನಗಳ ರಾಷ್ಟ್ರೀಯ ಕೈಮಗ್ಗ ಮತ್ತು ಕರಕುಶಲ ಸಮ್ಮೇಳನ ಇಂದು ಒಡಿಶಾದ ಭುವನೇಶ್ವರದಲ್ಲಿ ಪ್ರಾರಂಭವಾಯಿತು. ಈ ಸಮ್ಮೇಳನವು ದೇಶದ ವಿವಿಧ ಭಾಗಗಳ ಅಧಿಕಾರಿಗಳು ಮತ್ತು ಕುಶಲಕರ್ಮಿ ಪ್ರತಿನಿಧಿಗಳನ್ನು ಒಟ್ಟುಗೂಡಿಸುತ್ತದೆ. ಕರಕುಶಲ ವಲಯದಲ್ಲಿನ ಸವಾಲುಗಳು ಮತ್ತು ಅವಕಾಶಗಳ ಕುರಿತು ಚರ್ಚಿಸುವುದು ಹಾಗೂ ಕೇಂದ್ರ ಸರ್ಕಾರದ ಹೊಸ ಯೋಜನೆಗಳು ಮತ್ತು ಆ ಯೋಜನೆಗಳಲ್ಲಿ ರಾಜ್ಯಗಳ ಹೆಚ್ಚಿನ ಭಾಗವಹಿಸುವಿಕೆಯ ಬಗ್ಗೆ ಚರ್ಚಿಸುವುದು ಸಮ್ಮೇಳನದ ಪ್ರಮುಖ ಉದ್ದೇಶವಾಗಿದೆ.

************